**ANDOLANA**

Date: August 23, 2014 | Page: 10

Edition: Mysore | Language: Kannada

# ಭ್ರಷ್ಟಾಚಾರ ಪ್ರಗತಿಗೆ ಮಾರಕ

ಮೈಸೂರು,ಆ.೨೨–ಭ್ರಷ್ಟಾಚಾರವು ದೇಶದ ಪ್ರಗತಿಗೆ ಹಿನ್ನಡೆ ಉಂಟು ಮಾಡಲಿದ್ದು, ಇದು ದೇಶದ ಆರ್ಥಿಕಾಭಿವೃದ್ಧಿ ಮೇಲೆ ತನ್ನ ಕೆಟ್ಟ ಪರಿಣಾಮ ಬೀರಲಿದೆ ಎಂದು ಆಸ್ಟ್ರೇಲಿಯಾದ ಬಾಂಡ್ ವಿಶ್ವವಿದ್ಯಾನಿಲಯದ ಅರ್ಥಶಾಸ್ತ್ರ ಮತ್ತು ಸಂಖ್ಯಾಶಾಸ್ತ್ರದ ಪ್ರಾಧ್ಯಾಪಕ ಡಾ.ಕುಲದೀಪ್ ಕುಮಾರ್ ಹೇಳಿದರು.

ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಇನ್‌ಸ್ಟಿಟ್ಯೂಟ್ ಫಾರ್ ಮ್ಯಾನೇಜ್‌ಮೆಂಟ್ ಡೆವಲಪ್‌ಮೆಂಟ್‌ನ ಆವರಣದಲ್ಲಿ 'ಹಣಕಾಸು ಮತ್ತು ಲೆಕ್ಕಪರಿಶೋಧನೆಯಲ್ಲಿ ಉದಯೋನ್ಮುಖ ಪ್ರವೃತ್ತಿಗಳು' ವಿಷಯ ಕುರಿತು ಹಮ್ಮಿಕೊಂಡಿರುವ ಮೂರನೇ ಅಂತಾರಾಷ್ಟ್ರೀಯ ಸಮ್ಮೇಳನಕ್ಕೆ ಶುಕ್ರವಾರ ಚಾಲನೆ ನೀಡಿ ಅವರು ಮಾತನಾಡಿದರು.

ದೇಶದಲ್ಲಿ ತಾಂಡವವಾಡುತ್ತಿರುವ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಿದರೆ, ಒಟ್ಟು ದೇಶೀಯ ಉತ್ಪನ್ನದಲ್ಲಿ ಪ್ರಗತಿ ಕಾಣಲು ಸಾಧ್ಯವಿದೆ. ಭ್ರಷ್ಟಾಚಾರ ಎಂಬುದು ಕ್ಯಾನ್ಸರ್ ರೋಗಕ್ಕಿಂತ ಭಯಾನಕ ಎಂದರೂ ತಪ್ಪಿಲ್ಲ. ಅಷ್ಟರ ಮಟ್ಟಿಗೆ ದೇಶವನ್ನು ದುಸ್ಥಿತಿಗೆ ತಳ್ಳುವುದರಲ್ಲಿ ಯಾವುದೇ ಸಂದೇಹವಿಲ್ಲ. ಈ ಹಿನ್ನೆಲೆಯಲ್ಲಿ ಅದು ಸರ್ಕಾರಿ ಕ್ಷೇತ್ರವೇ ಆಗಿರಲಿ, ಇಲ್ಲವೇ ಖಾಸಗಿ ಕ್ಷೇತ್ರವೇ ಆಗಿರಲಿ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಬೇಕಿರುವುದು ಅನಿವಾರ್ಯ ಎಂದು ತಿಳಿಸಿದರು.

ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಲು ಮುಂದಾಗಬೇಕಿದ್ದು, ಇದಕ್ಕೆ ತಂತ್ರಜ್ಞಾನವನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕಿದೆ. ಉದಾಹರಣೆಗೆ, ಇ-ಆಡಳಿತದಿಂದ ಭ್ರಷ್ಟಾಚಾರಕ್ಕೆ ತೆಡಯೊಡ್ಡಿ, ಪಾರದರ್ಶಕತೆ ಕಾಯ್ದುಕೊಳ್ಳಬಹುದು ಅಲ್ಲದೆ, ಪ್ರಬಲವಾದ ನೀತಿ ಸಂಹಿತೆ ಜಾರಿಗೊಳಿಸಬೇಕು ಎಂದರು.

ಸಮ್ಮೇಳನಾಧ್ಯಕ್ಷ ಡಾ.ಉಲ್ಲಾಸ್‌ರಾವ್, ರಾಣೆ ಗ್ರೂಪ್‌ನ ಹೆಚ್‌ಆರ್, ಐಟಿ ಮತ್ತು ಶಿಕ್ಷಣ ವಿಭಾಗದ ಅಧ್ಯಕ್ಷ ಆರ್.ವೆಂಕಟನಾರಾಯಣ್ ಮತ್ತಿತರರು ಹಾಜರಿದ್ದರು.

## ಅಂತಾರಾಷ್ಟ್ರೀಯ ಸಮ್ಮೇಳನಕ್ಕೆ ಚಾಲನೆ ನೀಡಿ ಡಾ.ಕುಲದೀಪ್‌ಕುಮಾರ್



ಮೈಸೂರಿನ ಶ್ರೀಧರ್ಮ ಸ್ಥಳ ಮಂಜುನಾಥೇಶ್ವರ ಇನ್‌ಸ್ಟಿಟ್ಯೂಟ್ ಫಾರ್ ಮ್ಯಾನೇಜ್‌ಮೆಂಟ್ ಡೆವಲಪ್‌ಮೆಂಟ್‌ನ ಆವರಣದಲ್ಲಿ ಶುಕ್ರವಾರ ಆರಂಭವಾದ 'ಹಣಕಾಸು ಮತ್ತು ಲೆಕ್ಕಪರಿಶೋಧನೆಯಲ್ಲಿ ಉದಯೋನ್ಮುಖ ಪ್ರವೃತ್ತಿಗಳು' ವಿಷಯ ಕುರಿತ ಮೂರನೇ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ಡಾ.ಕುಲದೀಪ್‌ಕುಮಾರ್ ಉದ್ಘಾಟನಾ ಭಾಷಣ ಮಾಡಿದರು.

**ದೇಶದಲ್ಲಿ ಶೇ.೯೩ರಷ್ಟು ಮಂದಿ ಭ್ರಷ್ಟಾಚಾರದ ವಿರುದ್ಧ ಮಾತನಾಡುತ್ತಾರೆ. ಆದರೆ ಇವರಲ್ಲಿ ಅನೇಕರು ಅನಿವಾರ್ಯವಾಗಿ ಲಂಚ ನೀಡುವ ಮೂಲಕ ಭ್ರಷ್ಟಾಚಾರಕ್ಕೆ ಪ್ರೇರಣೆ ನೀಡುತ್ತಿರುತ್ತಾರೆ. ಅಲ್ಲದೆ, ಭ್ರಷ್ಟತೆ ವಿರುದ್ಧ ಕ್ರಮ ಜರುಗಿಸುವ ಪ್ರಕ್ರಿಯೆಯೂ ನಿಧಾನಗತಿಯಲ್ಲಿ ನಡೆಯುವುದು ನಿಜಕ್ಕೂ ದುರಂತವೇ ಸರಿ.**

**–ಡಾ.ಕುಲದೀಪ್‌ಕುಮಾರ್**